ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳಿಗೆ ನೇಮಕಾತಿ ಸಮಿತಿ ರಚಿಸುವುದು.

2217(2745) ಶ್ರೀ ಹೊನ್ನಳ್ಳಿ ಜಬ್ಬಾರ್ ಖಾನ್ ಹೈಯತ್ ಖಾನ್ (ಹುಬ್ಬಳ್ಳಿ) :— ಮಾನ್ಯ ಕಾರ್ಮಿಕ ಮತ್ತು ವಕ್ಫ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಸರಕಾರಿ ಕೈಗಾರಿಕಾ ಕೇಂದ್ರಗಳಲ್ಲಿ ತರಬೇತಿಗೆ ನೇಮಕಾತಿ ಮಾಡಿಕೊಳ್ಳಲು ಸಮಿತಿಗಳನ್ನು ರಚಿಸಲಾಗಿದೆಯೇ;

ಆ) ಸಮಿತಿಗಳು ರಚನೆಯಾದರೆ ನ್ಯಾಯಯುತವಾಗಿ ಎಲ್ಲ ವಿದ್ಯಾರ್ಥಿಗಳಿಗೆ ಪ್ರವೇಶ ಸಿಗುವುದು ತಮ್ಮ ಗಮನಕ್ಕೆ ಬಂದಿದೆಯೆ;

ಇ) ಪ್ರಸಕ್ತ ಸಾಲಿನಿಂದ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳಿಗೆ ನೇಮಕಾತಿ ಸಮಿತಿ ರಚಿಸಲಾಗುತ್ತಿದೆಯೆ;

ಈ) ಇಲ್ಲವಾದಲ್ಲಿ ಕಾರಣವೇನು?

ಶ್ರೀ ಎ.ಎಂ. ಹಿಂಡಸಗೇರಿ (ಕಾರ್ಮಿಕ ಮತ್ತು ವಕ್ಫ್ ಸಚಿವರು) :—

ಅ) ಇಲ್ಲ

ಆ) ಅನ್ವಯಿಸುವುದಿಲ್ಲ

ಇ) ಇಲ್ಲ

ಈ) ಸರ್ಕಾರಿ ಆದೇಶ ಸಂಖ್ಯೆ ಕಾ:ಇ 12 ಇಟಿಐ 97, ದಿನಾಂಕ 28-7-97ರಲ್ಲಿ ಸಮಿತಿಗಳನ್ನು ರದ್ದುಗೊಳಿಸಿ ಎಸ್.ಎಸ್.ಎಲ್.ಸಿ. ಪಿ.ಯು.ಸಿ. (10+2) ಮೆರಿಟ್-ಕಂ ರಿಸರ್ವೇಶನ್ ಪ್ರಕಾರ ನೇಮಕಾತಿ ಮಾಡುವುದನ್ನು ಜಾರಿಗೊಳಿಸಿದೆ.

ರಾಷ್ಟ್ರೀಯ ಹೆದ್ದಾರಿಗಳ ದುರಸ್ತಿ.

2218(2720) ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) :— ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

1. ರಾಜ್ಯ ಹೆದ್ದಾರಿಗಳು ಹಾಗೂ ಸೇತುವೆಗಳ ನಿರ್ಮಾಣಕ್ಕೆ ಸರ್ಕಾರ ಹಮ್ಮಿಕೊಂಡಿರುವ ಯೋಜನೆಗಳು ಯಾವುವು;